Akashvani: Bangalore
National News In Kannada
30.10.2025 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

30.10.2025 : 13.10hrs

*********

**ಮುಖ್ಯಾಂಶಗಳು**

1. ಬಿಹಾರ ವಿಧಾನಸಭೆ ಚುನಾವಣೆ ; ಎನ್‌ಡಿಎ, ಮಹಾಘಟಬಂಧನ್ ಮೈತ್ರಿಕೂಟದ ನಾಯಕರಿಂದ ಬಿರುಸುಗೊಂಡ ಪ್ರಚಾರ
2. ರಾಷ್ಟ್ರೀಯ ಏಕತಾ ದಿನದ ಅಂಗವಾಗಿ ನಾಳೆ ಗುಜರಾತ್‌ನ ಏಕತಾ ನಗರದಲ್ಲಿ ಏಕತಾ ಮೆರವಣಿಗೆ ಆಯೋಜನೆ
3. ನವದೆಹಲಿಯಲ್ಲಿಂದು ಮಾದರಿ ಯುವ ಗ್ರಾಮಸಭೆಗೆ ಚಾಲನೆ
4. ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ; ಎರಡನೇ ಸೆಮಿಫೈನಲ್‌ನಲ್ಲಿಂದು ಭಾರತ-ಆಸ್ಟ್ರೇಲಿಯಾ ಮುಖಾಮುಖಿ

*********

ಬಿಹಾರದಲ್ಲಿ ವಿಧಾನಸಭಾ ಚುನಾವಣೆಗೆ ಪ್ರಚಾರ ಮತ್ತಷ್ಟು ತೀವ್ರಗೊಂಡಿದ್ದು, ವಿವಿಧ ರಾಜಕೀಯ ಪಕ್ಷಗಳ ನಾಯಕರು ಮತ್ತು ಸ್ಟಾರ್ ಪ್ರಚಾರಕರು ರಾಜ್ಯಾದ್ಯಂತ ಸರಣಿ ರ್‍ಯಾಲಿಗಳನ್ನು ನಡೆಸುತ್ತಿದ್ದಾರೆ. ಬಿಜೆಪಿ ಹಿರಿಯ ನಾಯಕರು ಮತ್ತು ಪ್ರಧಾನಿ ನರೇಂದ್ರ ಮೋದಿ ಬಿಹಾರದ ಮುಜಫರ್‌ಪುರ ಮತ್ತು ಛಪ್ರಾದಲ್ಲಿ ಇಂದು, ಚುನಾವಣಾ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಕೂಡ ಇಂದು ಪಾಟ್ನಾದಲ್ಲಿ ಪತ್ರಿಕಾಗೋಷ್ಠಿ ನಡೆಸಲಿದ್ದಾರೆ.ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಸೇರಿದಂತೆ ಮಹಾಘಟಬಂಧನ್ ಮೈತ್ರಿಕೂಟದ ನಾಯಕರು ರಾಜ್ಯದ ವಿವಿಧೆಡೆ ಮೈತ್ರಿಕೂಟದ ಅಭ್ಯರ್ಥಿಗಳ ಪರ ಪ್ರಚಾರದಲ್ಲಿ ಭಾಗಿಯಾಗಲಿದ್ದಾರೆ. ಒಟ್ಟು ೧೦ ರ್‍ಯಾಲಿಗಳಲ್ಲಿ ಇಂದು ತೇಜಸ್ವಿ ಯಾದವ್ ಭಾಗವಹಿಸಲಿದ್ದಾರೆ. ಕಾಂಗ್ರೆಸ್ ಹಿರಿಯ ನಾಯಕ ರಾಹುಲ್ ಗಾಂಧಿ ಇಂದು ಶೇಖ್‌ಪುರದ ಬಾರ್ಬಿಘಾ ಹಾಗೂ ನಳಂದ ಜಿಲ್ಲೆಯ ನೂರ್‌ಸರೈನಲ್ಲಿ ಸಾರ್ವಜನಿಕ ಸಭೆಗಳನ್ನುದ್ದೇಶಿಸಿ

ಮಾತನಾಡಲಿದ್ದಾರೆ.ಬಿಹಾರ ವಿಧಾನಸಭೆಯ ೧೨೧ ಮತಕ್ಷೇತ್ರಗಳಿಗೆ ನವೆಂಬರ್ ೬ ರಂದು ಮತದಾನ ನಡೆಯಲಿದೆ.

*********

ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆಯ ಸ್ಮರಣಾರ್ಥ ನಾಳೆ ದೇಶಾದ್ಯಂತ ಏಕತೆಗಾಗಿ ಓಟವನ್ನು ಆಯೋಜಿಸಲಾಗುತ್ತಿದೆ. ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ದೇಶವಾಸಿಗಳನ್ನು ಈ ಓಟದಲ್ಲಿ ಭಾಗವಹಿಸುವಂತೆ ಮತ್ತು ಸರ್ದಾರ್ ವಲ್ಲಭಭಾಯಿ ಪಟೇಲ್ ಮತ್ತು ಅವರ ಏಕೀಕೃತ ಭಾರತದ ದೃಷ್ಟಿಕೋನವನ್ನು ಗೌರವಿಸುವಂತೆ ಕೋರಿದ್ದಾರೆ.

*********

ರಾಷ್ಟ್ರೀಯ ಏಕತಾ ದಿನದ ಅಂಗವಾಗಿ ಗುಜರಾತ್‌ನ ಕೇವಾಡಿಯದಲ್ಲಿ ನಾಳೆ 'ಏಕ ಭಾರತ ಶ್ರೇಷ್ಠ ಭಾರತ' ಸಂಕೇತಿಸುವ ಭವ್ಯವಾದ ಏಕತಾ ಮೆರವಣಿಗೆ ನಡೆಯಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಬಿಹಾರದ ಪಾಟ್ನಾದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಏತಕಾ ನಗರದಲ್ಲಿ ನಾಳೆ ಆಯೋಜಿಸಿರುವ ಏಕತಾ ಮೆರವಣಿಗೆಯನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಲಿದ್ದಾರೆ. ಕೇಂದ್ರ ಸಶಸ್ತ್ರ ಪಡೆಗಳು, ರಾಜ್ಯಗಳ ಪೊಲೀಸ್ ಪಡೆಗಳು ಸೇರಿದಂತೆ ದೇಶಾದ್ಯಂತ ಕಲಾವಿದರು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಧ್ವನಿ : ಅಮಿತ್ ಶಾ (೨೫ ಸೆಕೆಂಡ್‌ಗಳು)

*********

ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ಎರಡು ದಿನಗಳ ಗುಜರಾತ್ ಭೇಟಿ ಕೈಗೊಳ್ಳಲಿದ್ದಾರೆ. ಕೆವಾಡಿಯಾದ ಏಕ್ತಾ ನಗರದಲ್ಲಿಂದು ಪ್ರಧಾನಿ, ಒಂದು ಸಾವಿರದ ೧೪೦ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಮೂಲಸೌಕರ್ಯ ಮತ್ತು ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ರಾಜ್‌ಪಿಪ್ಲಾದಲ್ಲಿರುವ ಬಿರ್ಸಾ ಮುಂಡಾ ಬುಡಕಟ್ಟು ವಿಶ್ವವಿದ್ಯಾಲಯ, ವಾಮನ್ ವೃಕ್ಷ ವಾಟಿಕಾ, ಇ-ಬಸ್ ಚಾರ್ಜಿಂಗ್ ಡಿಪೋ ಮತ್ತು ೨೫

ವಿದ್ಯುತ್‌ಚಾಲಿತ ಬಸ್‌ಗಳು ಉದ್ಘಾಟನೆಗೊಳ್ಳಲಿವೆ. ಇದಲ್ಲದೆ, ಪ್ರಧಾನಿ, ಭಾರತದ ರಾಯಲ್ ಕಿಂಗ್‌ಡಮ್ಸ್ ಮ್ಯೂಸಿಯಂ, ಕ್ರೀಡಾ ಸಂಕೀರ್ಣ, ಶೂಲ್ಪನೇಶ್ವರ ಘಾಟ್ ಬಳಿಯ ಜೆಟ್ಟಿ ಅಭಿವೃದ್ಧಿ ಮತ್ತು ಏಕತಾ ಪ್ರತಿಮೆಯಲ್ಲಿ ಟ್ರಾವೆಲೇಟರ್‌ಗಳು ಸೇರಿದಂತೆ ವಿವಿಧ ಯೋಜನೆಗಳಿಗೆ ಶಿಲಾನ್ಯಾಸ ನೆರವೇರಿಸಲಿದ್ದಾರೆ. ನಾಳೆ ಪ್ರಧಾನಿ, ರಾಷ್ಟ್ರೀಯ ಏಕತಾ ದಿವಸ್ ಆಚರಣೆಯಲ್ಲಿ ಭಾಗವಹಿಸಲಿದ್ದು, ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮ ವಾರ್ಷಿಕೋತ್ಸವದಂದು ಅವರಿಗೆ ಪುಷ್ಪ ನಮನ ಸಲ್ಲಿಸಲಿದ್ದಾರೆ. ಆಚರಣೆಯ ಸಂದರ್ಭದಲ್ಲಿ ಅವರು ಏಕತಾ ದಿವಸ್ ಪ್ರತಿಜ್ಞೆ ಮತ್ತು ಏಕತಾ ದಿವಸ್ ಮೆರವಣಿಗೆಯಲ್ಲಿ ಭಾಗವಹಿಸಲಿದ್ದಾರೆ. ರಾಂಪುರ್ ಹೌಂಡ್ಸ್ ಮತ್ತು ಮುಧೋಲ್ ಹೌಂಡ್ಸ್‌ನಂತಹ ಭಾರತೀಯ ತಳಿಯ ಬೇಟೆನಾಯಿಗಳನ್ನು ಒಳಗೊಂಡಿರುವ ಬಿಎಸ್‌ಎಫ್ ತುಕಡಿ ಈ ವರ್ಷದ ಮೆರವಣಿಗೆಯ ಪ್ರಮುಖ ಆಕರ್ಷಣೆಯಾಗಿದೆ. ಇದರ ಜೊತೆಗೆ, ಆರಂಭ್ ೭.೦ ಸಮಾರೋಪ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ೧೦೦ನೇ ಫೌಂಡೇಶನ್ ಕೋರ್ಸ್‌ನ ತರಬೇತಿದಾರರೊಂದಿಗೆ ಸಂವಾದ ನಡೆಸಲಿದ್ದಾರೆ.

*********

ನವದೆಹಲಿಯಲ್ಲಿಂದು ಮಾದರಿ ಯುವ ಗ್ರಾಮ ಸಭೆ-ಎಂವೈಜಿಎಸ್ ಉಪಕ್ರಮವನ್ನು ಕೇಂದ್ರ ಸರ್ಕಾರ ಪ್ರಾರಂಭಿಸಲಿದೆ. ಈ ಉಪಕ್ರಮ ಪಂಚಾಯತ್ ರಾಜ್ ಸಚಿವಾಲಯ, ಶಿಕ್ಷಣ ಸಚಿವಾಲಯ ಮತ್ತು ಬುಡಕಟ್ಟು ವ್ಯವಹಾರಗಳ ಸಚಿವಾಲಯದ ಜಂಟಿ ಪ್ರಯತ್ನವಾಗಿದೆ. ಈ ಕಾರ್ಯಕ್ರಮದ ಸಂದರ್ಭದಲ್ಲಿ, ಮಾದರಿ ಯುವ ಗ್ರಾಮ ಸಭೆ ಮತ್ತು ಎಂವೈಜಿಎಸ್ ಪೋರ್ಟಲ್ ಕುರಿತು ತರಬೇತಿ ಮಾದರಿಯನ್ನು ಸಹ ಅನಾವರಣಗೊಳಿಸಲಾಗುವುದು. ಈ ಉಪಕ್ರಮವನ್ನು ದೇಶಾದ್ಯಂತ ಒಂದು ಸಾವಿರಕ್ಕೂ ಹೆಚ್ಚು ಶಾಲೆಗಳಲ್ಲಿ ಜಾರಿಗೆ ತರಲಾಗುವುದು ಎಂದು ಪಂಚಾಯತ್ ರಾಜ್ ಸಚಿವಾಲಯ ತಿಳಿಸಿದೆ.

*********

ಅಯೋಧ್ಯೆಯಲ್ಲಿ ಶ್ರೀ ರಾಮ ಜನ್ಮಭೂಮಿ ದೇವಾಲಯ ನಿರ್ಮಾಣಕ್ಕಾಗಿ ಪ್ರಪಂಚದಾದ್ಯಂತದ ರಾಮ ಭಕ್ತರು ಮೂರು ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ದೇಣಿಗೆ ನೀಡಿದ್ದಾರೆ ಎಂದು ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನ ಅಧ್ಯಕ್ಷ ನೃಪೇಂದ್ರ ಮಿಶ್ರಾ ತಿಳಿಸಿದ್ದಾರೆ. ರಾಮಮಂದಿರ ನಿರ್ಮಾಣಕ್ಕಾಗಿ ಇದುವರೆಗೆ ಒಂದು ಸಾವಿರದ ೫೦೦ ಕೋಟಿ ರೂಪಾಯಿಗಳನ್ನು

ಖರ್ಚು ಮಾಡಲಾಗಿದೆ. ಕಾಮಗಾರಿ ಪೂರ್ಣಗೊಳ್ಳುವ ವೇಳೆಗೆ ಇದು ಒಂದು ಸಾವಿರದ ೮೦೦ ಕೋಟಿ ರೂಪಾಯಿ ತಲುಪುವ ಸಾಧ್ಯತೆಯಿದೆ. ಮುಂದಿನ ವರ್ಷದ ಅಂತ್ಯದ ವೇಳೆಗೆ ರಾಮ ಮಂದಿರ ಉಳಿದ ಕಾಮಗಾರಿಗಳು ಪೂರ್ಣಗೊಳ್ಳಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ದೇಣಿಗೆ ನೀಡಿದ ಭಕ್ತರಿಗೆ ಕೃತಜ್ಞತೆ ಸಲ್ಲಿಸಿದ ಅವರು, ರಾಮಮಂದಿರ ಕೇವಲ ದೇವಾಲಯವಲ್ಲ. ಇದು ರಾಷ್ಟ್ರೀಯ ಮತ್ತು ಆಧ್ಯಾತ್ಮಿಕ ಏಕತೆಯ ಸಂಕೇತವಾಗಿದೆ ಎಂದರು. ಹೊಸದಾಗಿ ನಿರ್ಮಿಸಲಾದ ರಾಮಮಂದಿರದ ಶಿಖರದ ಮೇಲೆ ನವೆಂಬರ್ ೨೫ರಂದು ಪ್ರಧಾನಿ ನರೇಂದ್ರ ಮೋದಿ ಅವರು, ಧ್ವಜಾರೋಹಣ ಮಾಡುವ ಸಾಧ್ಯತೆಯಿದೆ. ಧ್ವಜವು ತ್ರಿಕೋನ ಆಕಾರದಲ್ಲಿದ್ದು, ಕೇಸರಿ ಬಣ್ಣದ್ದಾಗಿದೆ. ಇದು ೧೧ ಅಡಿ ಅಗಲ ಮತ್ತು ೨೫ ಅಡಿ ಉದ್ದವಿದೆ. ಇದು ಸೂರ್ಯವಂಶ ಮತ್ತು ತ್ರೇತಾಯುಗದ ಚಿಹ್ನೆಗಳನ್ನು ಹೊಂದಿದೆ ಎಂದು ನೃಪೇಂದ್ರ ಮಿಶ್ರಾ ವಿವರಿಸಿದರು.

*********

ನವೆಂಬರ್ ೧ ರಂದು ನಡೆಯಲಿರುವ ಆಸಿಯಾನ್ ರಕ್ಷಣಾ ಸಚಿವರ ಸಭೆಯಲ್ಲಿ ಭಾಗವಹಿಸಲು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದಿನಿಂದ ಎರಡು ದಿನಗಳ ಕಾಲ ಮಲೇಷಿಯಾಗೆ ಭೇಟಿ ನೀಡಲಿದ್ದಾರೆ. ಆಸಿಯಾನ್ ಸದಸ್ಯ ರಾಷ್ಟ್ರಗಳು ಮತ್ತು ಭಾರತದ ನಡುವೆ ರಕ್ಷಣಾ ಹಾಗೂ ಭದ್ರತಾ ಸಹಕಾರವನ್ನು ಮತ್ತಷ್ಟು ಬಲಪಡಿಸುವುದು ಮತ್ತು ಆಕ್ಟ್ ಈಸ್ಟ್ ಪಾಲಿಸಿಯನ್ನು ಮುನ್ನಡೆಸುವುದು ಈ ಸಭೆಯ ಗುರಿಯಾಗಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ರಾಜನಾಥ್ ಸಿಂಗ್ ತಿಳಿಸಿದ್ದಾರೆ. ಭೇಟಿಯ ಸಮಯದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಆಸಿಯಾನ್ ಸದಸ್ಯ ರಾಷ್ಟ್ರಗಳ ರಕ್ಷಣಾ ಸಚಿವರೊಂದಿಗೆ ಹಾಗೂ ಮಲೇಷಿಯಾ ನಾಯಕರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸುವ ನಿರೀಕ್ಷೆಯಿದೆ.

*********

ದಕ್ಷಿಣ ಕೊರಿಯಾದ ಬುಸಾನ್‌ನಲ್ಲಿ ನಡೆಯುತ್ತಿರುವ ಏಷ್ಯಾ-ಪೆಸಿಫಿಕ್ ಆರ್ಥಿಕ ಸಹಕಾರ ಶೃಂಗಸಭೆಯ ನೇಪಥ್ಯದಲ್ಲಿ, ಆರು ವರ್ಷಗಳಲ್ಲಿ ಮೊದಲ ಬಾರಿಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಚೀನಾದ ನಾಯಕ ಕ್ಸಿ ಜಿನ್‌ಪಿಂಗ್ ಮುಖಾಮುಖಿ ಭೇಟಿಯಾದರು. ಗಿಮ್ಹೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿಂದು ಉಭಯ ನಾಯಕರು ಒಂದೂವರೆ ಗಂಟೆಗೂ ಹೆಚ್ಚು ಕಾಲ ವಿವಿಧ ವಿಷಯಗಳ ಕುರಿತು ಮಾತುಕತೆ ನಡೆಸಿದರು.

*********

ನವಿ ಮುಂಬೈನ ಡಾ.ಡಿ.ವೈ.ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ಇಂದು ನಡೆಯುವ ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಎರಡನೇ ಸಮಿಫೈನಲ್ಸ್‌ನಲ್ಲಿ ಭಾರತ ಮತ್ತು ಆಸ್ಟ್ರೇಲಿಯಾ ವನಿತಾ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ. ಗುವಾಹಟಿಯ ಬರ್ಸಾಪರ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಮೊದಲ ಸಮಿಫೈನಲ್ಸ್‌ನಲ್ಲಿ ಇಂಗ್ಲೆಡ್ ವಿರುದ್ಧ ದಕ್ಷಿಣ ಆಫ್ರಿಕಾ ವನಿತಾ ತಂಡ ೧೨೫ ರನ್‌ಗಳ ಭರ್ಜರಿ ಜಯ ದಾಖಲಿಸಿದೆ. ಈ ಮೂಲಕ ಫೈನಲ್‌ಗೆ ಲಗ್ಗೆ ಇಟ್ಟಿದೆ.

*********

ಮೊಂಥಾ ಚಂಡಮಾರುತದ ಹಿನ್ನೆಲೆಯಲ್ಲಿ ತೆಲಂಗಾಣದ ಅನೇಕ ಪ್ರದೇಶಗಳಲ್ಲಿ ಭಾರೀ ಮಳೆಯಾಗಿದೆ.ವಾರಂಗಲ್, ಹನುಮಕೊಂಡ, ಜನಗಾಂವ್, ಮೆಹಬೂಬಾಬಾದ್, ಕರೀಂನಗರ, ಸಿದ್ದಿಪೇಟೆ ಮತ್ತು ಖಮ್ಮಂನಲ್ಲಿ ನಿನ್ನೆ ಒಂದೇ ದಿನ ೨೦ ಸೆಂಟಿ ಮೀಟರ್‌ಗಿಂತ ಹೆಚ್ಚಿನ ಮಳೆಯಾಗಿದೆ.ಹೈದರಾಬಾದ್‌ನಲ್ಲಿ ದಿನವಿಡಿ ನಿರಂತರ ಮಳೆಯಾಗಿದೆ. ವಾರಂಗಲ್, ಯಾದಾದ್ರಿ, ಭುವನಗಿರಿ, ಸಿದ್ದಿಪೇಟೆ ಸೇರಿದಂತೆ ೮ ಜಿಲ್ಲೆಗಳಿಗೆ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಿಸಿದೆ. ನೆರೆಪೀಡಿತ ಪ್ರದೇಶಗಳಲ್ಲಿ ಜನರ ರಕ್ಷಣೆ ಮತ್ತು ಪರಿಹಾರಕ್ಕಾಗಿ ಎನ್‌ಡಿಆರ್‌ಎಫ್ ಮತ್ತು ಎಸ್‌ಡಿಆರ್‌ಎಫ್ ತಂಡಗಳನ್ನು ನಿಯೋಜಿಸಲಾಗಿದೆ. ನೆರೆಯ ಕಾರಣ ಕೊನಾರ್ಕ್ ಎಕ್ಸ್‌ಪ್ರೆಸ್, ಗೋಲ್ಕೊಂಡಾ ಎಕ್ಸ್‌ಪ್ರೆಸ್ ಸೇರಿದಂತೆ ಹಲವು ರೈಲುಗಳನ್ನು ರದ್ದುಗೊಳಿಸಲಾಗಿದೆ. ಮತ್ತು ಅನೇಕ ರೈಲುಗಳ ಮಾರ್ಗಗಳನ್ನು ಬದಲಾಯಿಸಲಾಗಿದೆ.

*****END****